ಕರ್ನಾಟಕ ಸರ್ಕಾರ
ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ:ಕಾಶಿಇ/ಸ್ನಶಿ/45/ಪ್ರವೇಶಾತಿ ಮಾರ್ಗಸೂಚಿ/2020-21

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಉನ್ನತ ಶಿಕ್ಷಣ ಸೌಧ,
ಶೇಷಾದ್ರಿ ರಸ್ತೆ, ಬೆಂಗಳೂರು – 560 001,
ದಿನಾಂಕ: 05.09.2020.

## ಸುತ್ತೋಲೆ

**ವಿಷಯ:** 2020-21ನೇ ಸಾಲಿನಲ್ಲಿ ರಾಜ್ಯದ ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಆನ್‌ಲೈನ್ ಪ್ರವೇಶಾತಿಯ ಮೆರಿಟ್ ಹಾಗೂ ರೋಸ್ಟರ್ ಪಟ್ಟಿ ಅಂತಿಮಗೊಳಿಸಿ ಪ್ರವೇಶಾತಿ ನೀಡುವ ಕುರಿತು.

ಉಲ್ಲೇಖ: ಈ ಕಛೇರಿಯ ಸಮಸಂಖ್ಯೆ ಸುತ್ತೋಲೆ ದಿನಾಂಕ:14.07.2020 & 29.7.2020.

••••••••

ರಾಜ್ಯದ ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ 2020-21ನೇ ಶೈಕ್ಷಣಿಕ ಸಾಲಿನ ಪ್ರವೇಶಾತಿ ಪ್ರಕ್ರಿಯೆ ಕುರಿತು ಉಲ್ಲೇಖಿತ ಸುತ್ತೋಲೆಯಲ್ಲಿ ಮಾರ್ಗಸೂಚಿಗಳನ್ನು ಹೊರಡಿಸಲಾಗಿದೆ. ವಿದ್ಯಾರ್ಥಿಗಳು ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿದ ನಂತರ ಆಧ್ಯತೆ ಮೇರೆಗೆ ಕಾಲೇಜುವಾರು ಮೆರಿಟ್ / ರೋಸ್ಟರ್ ಅನ್ವಯ ಪಟ್ಟಿಯನ್ನು ಈ ಕಛೇರಿಯ ಹಂತದಲ್ಲಿ ಸಿದ್ಧಪಡಿಸಿ ಎರಡು ಹಂತಗಳಲ್ಲಿ ಈಗಾಗಲೇ ಕಾಲೇಜುಗಳಿಗೆ ರವಾನಿಸಲಾಗಿದೆ. ಇದರನ್ವಯ ಕಾಲೇಜುಗಳಲ್ಲಿ ವಿದ್ಯಾರ್ಥಿಗಳಿಗೆ ಪ್ರವೇಶಾತಿಯನ್ನು ನೀಡಲಾಗುತ್ತಿದೆ.

ಮುಂದುವರೆದು ಆನ್‌ಲೈನ್‌ನಲ್ಲಿ ವಿದ್ಯಾರ್ಥಿಗಳು ಸಲ್ಲಿಸುವ ಅರ್ಜಿಗಳ ಕಾಲೇಜುವಾರು ಮೆರಿಟ್ / ರೋಸ್ಟರ್ ಪಟ್ಟಿಯನ್ನು ಮುಂದಿನ ಹಂತದಲ್ಲಿ ಈ ಕಛೇರಿಯಿಂದ ಕಾಲೇಜುಗಳಿಗೆ ಬಿಡುಗಡೆ ಮಾಡಲಾಗುವುದಿಲ್ಲ. ಹಾಗೂ ಸಲ್ಲಿಕೆಯಾದ ಅರ್ಜಿಗಳನ್ನು ಕಾಲೇಜಿನ ಪ್ರವೇಶಾತಿ ಪೋರ್ಟಲ್‌ನಲ್ಲಿ ನೇರವಾಗಿ ಲಭ್ಯಗೊಳಿಸಲಾಗುವುದು. ಹೀಗೆ ಪೋರ್ಟಲ್‌ನಲ್ಲಿ ಸ್ವೀಕೃತಗೊಂಡ ಅರ್ಜಿಗಳನ್ನು ಕಾಲೇಜು ಹಂತದಲ್ಲಿ ಪರಿಶೀಲಿಸಿ, ಚಾಲ್ತಿಯಲ್ಲಿರುವ ಮೆರಿಟ್ / ರೋಸ್ಟರ್ ಪದ್ಧತಿಯಂತೆ ಪ್ರವೇಶಾತಿ ಪ್ರಕ್ರಿಯೆಯನ್ನು ಕೈಗೊಳ್ಳಲು ಈ ಮೂಲಕ ಸೂಚಿಸಲಾಗಿದೆ.

ಈ ಮೇಲ್ಕಂಡ ಕ್ರಮಗಳನ್ನು ಅನುಸರಿಸುವುದರೊಂದಿಗೆ ಪ್ರವೇಶಾತಿ ಕಡಿಮೆಯಾಗದಂತೆ ಕಾಳಜಿ ವಹಿಸಿ ಪ್ರಸ್ತುತ ಸಾಲಿನಲ್ಲಿ ಪ್ರವೇಶಾತಿ ಹೆಚ್ಚಳಕ್ಕೆ ಅಗತ್ಯವಿರುವ ಎಲ್ಲಾ ಕ್ರಮಗಳನ್ನು ಅನುಸರಿಸಲು ಸೂಚಿಸಿದೆ.

ಆಯುಕ್ತರು,
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ

ಇವರಿಗೆ:

1. ರಾಜ್ಯದ ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ – ಅಗತ್ಯ ಕ್ರಮಕ್ಕಾಗಿ.
2. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕೇಂದ್ರ ಕಛೇರಿ, ಬೆಂಗಳೂರು- ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ತಿಳಿಸಲಾಗಿದೆ.